## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಡಾ: ತೇಜಸ್ವಿನಿ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1167 |
| ಉತ್ತರಿಸಬೇಕಾದ ದಿನಾಂಕ | : | 23.12.2021 |
| ಉತ್ತರಿಸುವ ಸಚಿವರು | : | ಕಾರ್ಮಿಕ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರಸ್ತುತ ಜಾರಿಯಲ್ಲಿರುವ ಕಾರ್ಮಿಕ ಕಾಯ್ದೆ ಯಾವಾಗ ಜಾರಿಗೆ ಬಂದಿದೆ; ಕಾಲಕಾಲಕ್ಕೆ ಅನುಗುಣವಾಗಿ ವೇತನ ಪರಿಷ್ಕರಣೆ ಆಗುತ್ತಿದೆಯೇ; | ಕನಿಷ್ಠ ವೇತನ ನಿಗಧಿ ಹಾಗೂ ಪರಿಷ್ಕರಣೆಯನ್ನು ಕನಿಷ್ಟ ವೇತನ ಕಾಯ್ದೆ 1948ರ ಪ್ರಾವಧಾನಗಳನ್ವಯ ಮಾಡಲಾಗುತ್ತದೆ. ಸದರಿ ಕಾಯ್ದೆಯು ಕೇಂದ್ರ ಕಾಯ್ದೆಯಾಗಿದ್ದು 1948 ರಿಂದ ಜಾರಿಯಲ್ಲಿರುತ್ತದೆ. ಈ ಕಾಯ್ದೆಗೆ 1958ರಲ್ಲಿ ಕರ್ನಾಟಕ ರಾಜ್ಯವು ನಿಯಮಾವಳಿಗಳನ್ನು ರೂಪಿಸಿರುತ್ತದೆ. ಕಾಯ್ದೆಯ ಪ್ರಾವಧಾನಗಳನ್ವಯ ಎಲ್ಲಾ ಅನುಸೂಚಿತ ಉದ್ದಿಮೆಗಳಿಗೆ 5 ವರ್ಷಗಳ ಅವಧಿ ಮೀರದಂತೆ ಕನಿಷ್ಠ ವೇತನ ದರಗಳ ಪರಿಷ್ಕರಣೆ ಮಾಡಬೇಕಾಗಿದ್ದು ಅದರನ್ವಯ ಕಾಲಕಾಲಕ್ಕೆ ಪರಿಷ್ಕರಣೆ ಮಾಡಲಾಗುತ್ತಿದೆ. |
| ಆ) | ಕಾರ್ಮಿಕ ಇಲಾಖೆಯಲ್ಲಿ ತಾಂತ್ರಿಕ ಪರಿಣಿತಿ ಹುದ್ದೆಗಳಿಗೆ, ವಿದ್ಯಾರ್ಹತೆಗೆ ಅನುಗುಣವಾಗಿ ವೇತನವನ್ನು ನಿಗಧಿಗೊಳಿಸಲಾಗಿದೆಯೇ; ಹಾಗಿದ್ದಲ್ಲಿ ಹುದ್ದೆವಾರು-ವೇತನವಾರು ವಿವರ ನೀಡುವುದು; | ಸರ್ಕಾರದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ ಮತ್ತು ಹೊರಗುತ್ತಿಗೆ ಆಧಾರದ ಮೇಲೆ ತಾಂತ್ರಿಕ ಹುದ್ದೆಗಳಲ್ಲಿ ಕೆಲಸ ನಿರ್ವಹಿಸುವ ಸಿಬ್ಬಂದಿಗಳಿಗೆ ತಾಂತ್ರಿಕ ಪರಿಣಿತಿ ಹಾಗೂ ವಿದ್ಯಾರ್ಹತೆಗೆ ಅನುಗುಣವಾಗಿ ಕಾರ್ಮಿಕ ಇಲಾಖೆ ವತಿಯಿಂದ ವೇತನ ನಿಗದಿಪಡಿಸಿರುವುದಿಲ್ಲ. ಆದರೆ, ಕೌಶಲ್ಯವಾರು ವಿಂಗಡನೆ ಮಾಡಿ ವೇತನವನ್ನು ನಿಗಧಿಪಡಿಸಲಾಗುತ್ತದೆ. ಈ ಹಿನ್ನೆಲೆಯಲ್ಲಿ ಸದರಿ ಸಿಬ್ಬಂದಿಗಳಿಗೆ ವೇತನ ಪಾವತಿಸುವಾಗ ಅಳವಡಿಸಿಕೊಳ್ಳಬೇಕಾದ ಅನುಸೂಚಿತ ಉದ್ದಿಮೆಗಳ ಕುರಿತು ಮಾರ್ಗಸೂಚಿಯನ್ನು ನೀಡಿ ದಿನಾಂಕ: 29.12.2017 ರಂದು ಸರ್ಕಾರವು ಸುತ್ತೋಲೆಯನ್ನು ಹೊರಡಿಸಿರುತ್ತದೆ. ಸದರಿ ಮಾಹಿತಿಯನ್ನು ಅನುಬಂಧ-1 ಮತ್ತು 1-ಎ ಸಲ್ಲಿಸಿದೆ. ಸದರಿ ಸುತ್ತೋಲೆಯನ್ವಯ "ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಉದ್ಯೋಗ" ಅನುಸೂಚಿತ ಉದ್ದಿಮೆಯನ್ವಯ ವೇತನ ಪಾವತಿಸಬೇಕಾಗುತ್ತದೆ.<br>ಸದರಿ ಸುತ್ತೋಲೆಯಲ್ಲಿ ಪ್ರಸ್ತುತ ಸರ್ಕಾರಿ ಕಛೇರಿಗಳಲ್ಲಿ ಕೆಲಸ ಮಾಡುತ್ತಿರುವ ಎಲ್ಲಾ ತಾಂತ್ರಿಕ ಸ್ವರೂಪದ ಹುದ್ದೆಗಳನ್ನು ಸೇರ್ಪಡೆಗೊಳಿಸಿರುವುದಿಲ್ಲ. ಅಧಿಸೂಚನೆಯಲ್ಲಿ ನಮೂದಿಸಿರದ ಹುದ್ದೆಗಳಿಗೆ ವೇತನ ದರಗಳನ್ನು ನಿಗದಿಪಡಿಸುವ ಸಂದರ್ಭದಲ್ಲಿ ಸುತ್ತೋಲೆಯ ಕ್ರ. ಸಂ. 4 ರಲ್ಲಿ ತಿಳಿಸಿರುವಂತೆ ತತ್ಸಮಾನ ಸ್ವರೂಪದ ಕೆಲಸಗಳನ್ನು ನಿರ್ವಹಿಸುತ್ತಿರುವ ಹುದ್ದೆಗಳಿಗೆ ನಿಗದಿಪಡಿಸಿರುವ ವೇತನಕ್ಕೆ ಸಮಾನವಾದ ವೇತನವನ್ನು ಪಾವತಿಸಬಹುದಾಗಿರುತ್ತದೆ. ಹುದ್ದೆಯ ಕೆಲಸದ ಸ್ವರೂಪ ಹಾಗೂ ಕೌಶಲ್ಯವನ್ನು ಆಧರಿಸಿ, ಕನಿಷ್ಠ ವೇತನಕ್ಕಿಂತ ಹೆಚ್ಚಿನ ವೇತನ ಪಾವತಿಸುವುದಿದ್ದಲ್ಲಿ, ಯಾವುದೇ ಅಭ್ಯಂತರವಿರುವುದಿಲ್ಲ. ಇದು ಆಯಾ ಇಲಾಖೆಗಳ ನಿರ್ಧಾರಕ್ಕೆ ಸಂಬಂಧಿಸಿರುತ್ತದೆ. |

| | | |
|---|---|---|
| ಇ) | ರಾಜ್ಯದಲ್ಲಿ ಕನಿಷ್ಠ ವೇತನವನ್ನು ಎಷ್ಟು ಮೊತ್ತಕ್ಕೆ ನಿಗಧಿಗೊಳಿಸಲಾಗಿದೆ; ಈ 'ಕನಿಷ್ಠ ವೇತನ' ನಿಗಧಿಗೆ ಯಾವ ಮಾನದಂಡಗಳನ್ನು ಅನುಸರಿಸಲಾಗಿದೆ; | ಸರ್ಕಾರವು ಕನಿಷ್ಠ ವೇತನ ಕಾಯ್ದೆ 1948 ರಡಿ ಒಟ್ಟು ಎಂಭತ್ಮೂರು (83) ಉದ್ದಿಮೆಗಳಿಗೆ ಕನಿಷ್ಠ ವೇತನ ದರಗಳನ್ನು ನಿಗದಿಪಡಿಸಿರುತ್ತದೆ. ಸದರಿ ಅನುಸೂಚಿತ ಉದ್ದಿಮೆಗಳಿಗೆ 2021-22 ನೇ ಸಾಲಿಗೆ ಅನ್ವಯವಾಗುವ ಕನಿಷ್ಠದಿಂದ-ಗರಿಷ್ಠ ವೇತನ ದರಗಳ ವಿವರಗಳನ್ನು ಅನುಬಂಧ-2 ರಲ್ಲಿ ಸಲ್ಲಿಸಿದೆ.<br>ಶ್ರೀ ಎ. ಶಾಂತಪ್ಪ ಸಮಿತಿಯ ಶಿಫಾರಸ್ಸುಗಳು ಮತ್ತು ಗೌರವಾನ್ವಿತ ಭಾರತ ಸರ್ವೋಚ್ಛ ನ್ಯಾಯಾಲಯವು ಮೆ॥ ರೆಪ್ಟೋಕಾಸ್ ಬ್ರೆಟ್ ಕಂಪನಿ ಲಿಮಿಟೆಡ್ (1992 AIR 504) ಪ್ರಕರಣದಲ್ಲಿ ದಿನಾಂಕ: 31.10.1991 ರಂದು ನೀಡಿರುವ ತೀರ್ಪಿನ ನಿರ್ದೇಶನಗಳನ್ವಯ, ರಾಜ್ಯದ 16 ಕೇಂದ್ರಗಳಿಂದ ಕ್ರೋಢೀಕರಿಸಿದ ಆಹಾರ ಧಾನ್ಯಗಳು, ವಸತಿ ಹಾಗೂ ಬಟ್ಟೆಯ ದರಗಳ ಸರಾಸರಿ ಮೊತ್ತವನ್ನು ಲೆಕ್ಕಾಚಾರ ಮಾಡುವ ಮಾನದಂಡಗಳನ್ನು ಅನುಸರಿಸಿ ಕನಿಷ್ಠ ವೇತನ ದರಗಳನ್ನು ನಿಗದಿಪಡಿಸಲಾಗುತ್ತದೆ. |
| ಈ) | ಇತ್ತೀಚಿನ ದಿನಗಳಲ್ಲಿ ಅನೇಕ ಇಲಾಖೆಗಳಲ್ಲಿ ಹೆಚ್ಚಿನ ಹುದ್ದೆಗಳು ಖಾಲಿ ಇದ್ದು, ಸರ್ಕಾರಿ ನೇಮಕಾತಿ ಸ್ಥಗಿತಗೊಂಡಿರುವುದರಿಂದ, ಗುತ್ತಿಗೆ ಆಧಾರದ ಮೇಲೆಯೇ ಕಾರ್ಯನಿರ್ವಹಿಸುವ ತಾಂತ್ರಿಕ ಪರಿಣಿತ ಸಿಬ್ಬಂದಿಗಳಿಗೆ ಜೀವನಾವಶ್ಯಕತೆ ತಕ್ಕಂತೆ ಸಂಬಳ ನೀಡದಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ; | ಸರ್ಕಾರಿ ಇಲಾಖೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುವ ನೌಕರರಿಗೆ ಪ್ರತ್ಯೇಕವಾಗಿ ಯಾವುದೇ ವೇತನವನ್ನು ನಿಗದಿಪಡಿಸಿರುವುದಿಲ್ಲ. ಸದರಿ ಗುತ್ತಿಗೆ ಕಾರ್ಮಿಕರಿಗೆ ದಿನಾಂಕ: 29.12.2017 ರಂದು ಸರ್ಕಾರವು ಹೊರಡಿಸಿರುವ ಸುತ್ತೋಲೆಯ ಮಾರ್ಗಸೂಚಿಗಳಂತೆ "ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಉದ್ಯೋಗ" ಅನುಸೂಚಿತ ಉದ್ದಿಮೆಯ ವೇತನ ದರಗಳು ಅನ್ವಯವಾಗುತ್ತವೆ. ಕನಿಷ್ಠ ವೇತನ ಕಾಯ್ದೆಯ ಅನುಸಾರ ಕನಿಷ್ಠ ವೇತನವನ್ನು ಮಾತ್ರ ನಿಗದಿಪಡಿಸಿದ್ದು, ಜೀವನಾವಶ್ಯಕತೆಗೆ ತಕ್ಕಂತೆ ವೇತನ ನಿಗದಿಪಡಿಸಲು ಕಾಯ್ದೆಯಲ್ಲಿ ಅವಕಾಶವಿರುವುದಿಲ್ಲ. ಹೊರಗುತ್ತಿಗೆ ನೌಕರರ ಕೆಲಸದ ಸ್ವರೂಪ ಹಾಗೂ ಕೌಶಲ್ಯವನ್ನು ಆಧರಿಸಿ ಸರ್ಕಾರಿ ಇಲಾಖೆಗಳು ಕನಿಷ್ಠ ವೇತನಕ್ಕಿಂತ ಹೆಚ್ಚಿನ ವೇತನವನ್ನು ಪಾವತಿಸುವುದಾದಲ್ಲಿ ಯಾವುದೇ ಅಭ್ಯಂತರವಿರುವುದಿಲ್ಲ. |
| ಉ) | ಬಂದಿದ್ದಲ್ಲಿ, ಸರ್ಕಾರವು ಈ ತಾರತಮ್ಯದ ಅನ್ಯಾಯವನ್ನು ಸರಿಪಡಿಸಲು ಯಾವ ರೀತಿಯ (ಗುತ್ತಿಗೆ ಹಾಗೂ ಹೊರಗುತ್ತಿಗೆ ನೌಕರರ ವೇತನಗಳಲ್ಲಿನ ತಾರತಮ್ಯ) ಕ್ರಮಗಳನ್ನು ಕೈಗೊಂಡಿದೆ? | |

**ಸಂಖ್ಯೆ: ಕಾಇ 115 ಎಲ್ ಡಬ್ಲ್ಯೂಎ 2021**

(ಅರಬೈಲ್ ಶಿವರಾಮ ಹೆಬ್ಬಾರ್)
ಕಾರ್ಮಿಕ ಸಚಿವರು

ಅನುಬಂಧ-1



ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 51 ಎಲ್‌ಡಬ್ಲ್ಯೂಎ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 29-12-2017

## ಸುತ್ತೋಲೆ

ವಿಷಯ: ವಿವಿಧ ಇಲಾಖೆಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ನೇಮಕಗೊಂಡ ಸಿಬ್ಬಂದಿಗಳಿಗೆ ಕನಿಷ್ಠ ವೇತನ ನೀಡುವ ಬಗ್ಗೆ.

ಉಲ್ಲೇಖ:
1) ಸಿಆಸು ಇಲಾಖೆಯ ಆದೇಶ ಸಂಖ್ಯೆ: ಸಿಆಸುಇ 20 ಸೇಸ್ಥಅ 94, ದಿನಾಂಕ: 21-11-1994.
2) ಕಾರ್ಮಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಕಾಇ 173 ಎಲ್‌ಎಂಡಬ್ಲ್ಯೂ 2006, ದಿನಾಂಕ: 30-04-2007.

*********

ಸರ್ಕಾರದ ವಿವಿಧ ಇಲಾಖೆಗಳಲ್ಲಿ ನೇಮಕಗೊಂಡ ದಿನಗೂಲಿಯ ನೌಕರರು ಆಯಾ ಹುದ್ದೆಗಳಲ್ಲಿ, ನಿರ್ವಹಿಸುತ್ತಿರುವ ಕೆಲಸಗಳು/ಕಾರ್ಯಭಾರಗಳು, ಕನಿಷ್ಠ ವೇತನದ ಕಾಯ್ದೆಯಡಿಯಲ್ಲಿ ಬರುವ ಉದ್ಯೋಗಗಳಲ್ಲಿನ ಆಯಾ ಹುದ್ದೆಗಳಿಗೆ ಸರಿಸಮಾನವಾದ ಪಕ್ಷದಲ್ಲಿ, ದಿನಗೂಲಿ ನೌಕರರಿಗೂ ಕೂಡ ಕನಿಷ್ಠ ವೇತನಕ್ಕಿಂತ ಕಡಿಮೆ ಇಲ್ಲದ ವೇತನವನ್ನು ನೀಡುವಂತೆ ಉಲ್ಲೇಖ (1)ರ ಆದೇಶದಲ್ಲಿ ಸೂಚಿಸಲಾಗಿದೆ.

1948ರ ಕನಿಷ್ಠ ವೇತನದ ಕಾಯ್ದೆಯಡಿ ಬರುವ ಉದ್ಯೋಗಗಳಿಗೆ ಕಾಲಕಾಲಕ್ಕೆ ಕಾರ್ಮಿಕ ಇಲಾಖೆಯಿಂದ ಕನಿಷ್ಠ ವೇತನವನ್ನು ಪರಿಷ್ಕರಿಸಿ ಅಧಿಸೂಚನೆಗಳನ್ನು ಹೊರಡಿಸಲಾಗುತ್ತಿದೆ. ಆದರೆ ಕನಿಷ್ಠ ವೇತನದ ಅಧಿಸೂಚನೆಗಳಲ್ಲಿ, ದಿನಗೂಲಿಯನ್ನು ನಿಗಧಿಪಡಿಸದೇ ಇರುವ ಕೆಲವು ಹುದ್ದೆಗಳಿಗೆ ಅಂದರೆ ಶೀಘ್ರಲಿಪಿಗಾರರು/ಬೆರಳಚ್ಚುಗಾರರು/ದ್ವಿತೀಯ ದರ್ಜೆ ಸಹಾಯಕರು ಇವರುಗಳಿಗೆ ಸಿನಿಮಾ ಉದ್ದಿಮೆಗಳಿಗೆ ನಿಗಧಿಪಡಿಸಿದ ಕನಿಷ್ಠ ವೇತನ ದರಗಳನ್ನು ಹಾಗೂ ಗ್ರೂಪ್ "ಡಿ" ಹುದ್ದೆಗಳ ನೌಕರರಿಗೆ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಉದ್ದಿಮೆಗಳಿಗೆ ನಿಗಧಿಪಡಿಸಿದ ಕನಿಷ್ಠ ದರಗಳನ್ನು ಅನ್ವಯಿಸಿಕೊಂಡು ದಿನಗೂಲಿ ವೇತನವನ್ನು ಮತ್ತು ಜೀವನ ನಿರ್ವಹಣೆಯ ಭತ್ಯೆಯನ್ನು ನೀಡುವ ಬಗ್ಗೆ ಉಲ್ಲೇಖ (2)ರ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು.

ಪ್ರಸ್ತುತ ಸರ್ಕಾರದ ವಿವಿಧ ಇಲಾಖೆಗಳು, ಸರ್ಕಾರಿ ಸ್ವಾಮ್ಯದ ನಿಗಮಗಳು, ಮಂಡಳಿಗಳು, ವಿಶ್ವವಿದ್ಯಾಲಯಗಳು, ಮಹಾವಿದ್ಯಾಲಯಗಳು, ಶಾಲೆಗಳು, ಸ್ಥಳೀಯ ಸಂಸ್ಥೆಗಳು, ಶಾಸನಬದ್ಧ ಸಂಸ್ಥೆಗಳು, ಸೊಸೈಟಿಗಳು, ಪರಿಷತ್ತುಗಳು, ಯಾವುದೇ ರೀತಿಯ ರಾಜ್ಯ ಸರ್ಕಾರದ ಅಧೀನ / ಸ್ವಾಯತ್ತ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ನೇಮಕಗೊಂಡು ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಪಾವತಿಸಬೇಕಾದ ಕನಿಷ್ಠ ವೇತನದ ಕುರಿತು ಹಲವಾರು ಇಲಾಖೆಗಳು ಕಾರ್ಮಿಕ ಇಲಾಖೆಗೆ ಸ್ಪಷ್ಟೀಕರಣಗಳನ್ನು ಕೋರಿರುತ್ತಾರೆ. ಉಲ್ಲೇಖ (1)ರ ಸಿ.ಆ.ಸು. ಇಲಾಖೆಯ ಆದೇಶ ಮತ್ತು ಉಲ್ಲೇಖ (2)ರ ಕಾರ್ಮಿಕ ಇಲಾಖೆಯ ಸುತ್ತೋಲೆಯು 10 ವರ್ಷಗಳಿಗೂ ಮೀರಿದ ಅವಧಿಯದ್ದಾಗಿರುವುದರಿಂದ ಪ್ರಸ್ತುತ ಅವಧಿಯಲ್ಲಿನ ವಿದ್ಯಮಾನಗಳಿಗೆ

ಅನ್ವಯವಾಗುವಂತೆ ಈ ಕೆಳಕಂಡ ಉದ್ದಿಮೆಗಳಿಗೆ ಸಂಬಂಧಿಸಿದಂತೆ, ಹೊರಡಿಸಿರುವ ಕನಿಷ್ಠ ವೇತನ ದರಗಳನ್ನು ಅನ್ವಯಿಸಿಕೊಳ್ಳಲು ಸುತ್ತೋಲೆಯನ್ನು ಹೊರಡಿಸಲಾಗಿದೆ.

1. ಹೊರಗುತ್ತಿಗೆ ಸಿಬ್ಬಂದಿಗಳನ್ನು ಭದ್ರತಾ ಏಜೆನ್ಸಿ ಮುಖಾಂತರ ನೇಮಿಸಿಕೊಂಡಿದ್ದಲ್ಲಿ "ಭದ್ರತಾಏಜೆನ್ಸಿ" ಅನುಸೂಚಿತ ಉದ್ದಿಮೆಗೆ ನಿಗಧಿಪಡಿಸಿರುವ ಕನಿಷ್ಠ ವೇತನವನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಕಾಇ 123 ಎಲ್‌ಡಬ್ಲ್ಯೂಎ 2015, ದಿನಾಂಕ: 29-02-2016ರಲ್ಲಿ ತಿಳಿಸಿರುವ ಕನಿಷ್ಠ ವೇತನ ದರಗಳನ್ನು ಪಾವತಿಸತಕ್ಕದ್ದು.
2. ಇತರೆ ಮಾನವ ಸಂಪನ್ಮೂಲ ಏಜೆನ್ಸಿಗಳಿಂದ ಹೊರಗುತ್ತಿಗೆ ಸಿಬ್ಬಂದಿಗಳನ್ನು ನೇಮಿಸಿಕೊಂಡಲ್ಲಿ, "ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳು" ಅನುಸೂಚಿತ ಉದ್ದಿಮೆಗೆ ನಿಗಧಿಪಡಿಸಿರುವ ಕನಿಷ್ಠ ವೇತನವನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಕಾಇ 71 ಎಲ್‌ಡಬ್ಲ್ಯೂಎ 2015, ದಿನಾಂಕ: 05-08-2016ರಲ್ಲಿ ತಿಳಿಸಿರುವ ಕನಿಷ್ಠ ವೇತನ ದರಗಳನ್ನು ಪಾವತಿಸತಕ್ಕದ್ದು.
3. ಒಳಚರಂಡಿ, ಸ್ನಾನಗೃಹ ಮತ್ತು ಶೌಚಾಲಯಗಳನ್ನು ಸ್ವಚ್ಛಗೊಳಿಸುವ ಹಾಗೂ ಅದೇ ರೀತಿಯ ಕೆಲಸಗಳಲ್ಲಿ ನಿರತರಾಗಿರುವ ಕಾರ್ಮಿಕರುಗಳಿಗೆ "ಖಾಸಗಿ ಸಫಾಯಿ ಕರ್ಮಚಾರಿ" ಅನುಸೂಚಿತ ಉದ್ದಿಮೆಗೆ ನಿಗಧಿಪಡಿಸಿರುವ ಕನಿಷ್ಠ ವೇತನವನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಕಾಇ 82 ಎಲ್‌ಡಬ್ಲ್ಯೂಎ 2015, ದಿನಾಂಕ: 04-08-2016ರಲ್ಲಿ ತಿಳಿಸಿರುವ ಕನಿಷ್ಠ ವೇತನ ದರಗಳನ್ನು ಪಾವತಿಸತಕ್ಕದ್ದು.
4. ಕಾರ್ಮಿಕರ ಕೆಲಸದ ಸ್ವರೂಪದ ಬಗ್ಗೆ ಸ್ಪಷ್ಟತೆ ಇರದಿದ್ದಲ್ಲಿ, ಈ ಬಗ್ಗೆ ಸ್ಪಷ್ಟವಾಗಿ ನಿರ್ಣಯಕ್ಕೆ ಬರಲು ಇಲಾಖೆಗಳ/ಅಧೀನ ಸಂಸ್ಥೆಗಳ ಸಕ್ಷಮ ಅಧಿಕಾರಿಗಳ ಸಮಿತಿಯೊಂದನ್ನು ರಚಿಸಿ ಯಾವ ಸ್ವರೂಪದ ಕೆಲಸಗಳು ಅಧಿಸೂಚನೆಯಲ್ಲಿ ನಮೂದಾಗಿರುವ ಕೆಲಸದ ಸ್ವರೂಪಗಳಿಗೆ ಸಮಾನವಾಗಿವೆ ಎಂಬುದನ್ನು ಅಧ್ಯಯನ ಮಾಡಿ, ನಿರ್ಣಯಕ್ಕೆ ಬಂದು ಆಯಾ ಸ್ವರೂಪದ ಕೆಲಸಗಳಿಗೆ ವೇತನ ಅನ್ವಯಿಸಿಕೊಳ್ಳಬಹುದಾಗಿರುತ್ತದೆ.
5. ಹೊರಗುತ್ತಿಗೆ/ಗುತ್ತಿಗೆಯ ಆಧಾರದ ಮೇಲೆ ನೌಕರರನ್ನು ನೇಮಿಸಿಕೊಳ್ಳುವ ಸಂದರ್ಭದಲ್ಲಿ ಸರ್ಕಾರವು ಒಬ್ಬ ಆದರ್ಶ ಉದ್ಯೋಗದಾತನಾಗಿರಬೇಕು.
6. ಕಾಲ ಕಾಲಕ್ಕೆ ಯಾವುದೇ ನವೀಕರಿಸಿದ ವ್ಯತ್ಯಸ್ಥ ತುಟ್ಟಿಭತ್ಯೆ ದರಗಳು ವಾಸ್ತವವಾಗಿ ಕನಿಷ್ಠವೆಂದು ಪರಿಗಣಿಸಬಹುದಾದ ದರಗಳಲ್ಲಿರಬೇಕು.
7. ಕನಿಷ್ಠ ದರಗಳು, ತಳಮಟ್ಟದ ದರಗಳಾಗಿರಬೇಕು. ಕನಿಷ್ಠ ದರಕ್ಕಿಂತಲೂ ಹೆಚ್ಚಿನ ದರಗಳಲ್ಲಿ ನಿಗಧಿಪಡಿಸುವಲ್ಲಿ ಇಲಾಖೆಯು ಸ್ವತಂತ್ರವಾಗಿರುತ್ತಿದ್ದು, ನಿಯಮಿತ ಉದ್ಯೋಗಿಗಳಿಗಾಗಿ ಒಂದೇ ರೀತಿಯ ಕೆಲಸಕ್ಕಾಗಿರುವ ಕನಿಷ್ಠ ದರಗಳಿಗೆ ಹತ್ತಿರವಾಗಿ ನಿರ್ಧರಿಸುವಂತಿರಬೇಕು.
8. ವಿರಾಮವು ಒಳಗೊಂಡಂತೆ ಒಂದು ದಿನಕ್ಕೆ ಎಂಟು ಘಂಟೆಗಳ ಕೆಲಸಕ್ಕಾಗಿ ಕನಿಷ್ಠ ವೇತನವಿದ್ದು, ಎಂಟು ತಾಸಿಗಿಂತಲೂ ಹೆಚ್ಚಿನ ಕೆಲಸಕ್ಕಾಗಿ ಹೆಚ್ಚುವರಿ ಭತ್ಯೆಯನ್ನು ಘಂಟೆಯು ಹೆಚ್ಚಾದಂತೆ ದ್ವಿಗುಣ ದರದಲ್ಲಿ ನೀಡುವುದು. ಒಂದು ದಿನದಲ್ಲಿ ಕಡಿಮೆ ತಾಸು ಕೆಲಸ ನಿರ್ವಹಿಸಿದ್ದಕ್ಕಾಗಿ ಸರಾಸರಿ ಮೊತ್ತವನ್ನು ಕಡಿತಗೊಳಿಸುವುದು.
9. ಮಾಹೆಯಾನ 4 ದಿವಸಗಳಿಗೆ ಪಾವತಿಸಿದ ರಜಾ ದಿವಸಗಳನ್ನು ಸೇರಿಸಿ ದಿನಗೂಲಿ ದರವನ್ನು ಲೆಖ್ಖ ಹಾಕುವುದು.

$$\frac{\text{ತಿಂಗಳ ವೇತನ}}{\text{26 ದಿನಗಳು}} = \frac{\text{ದಿನದ ವೇತನ}}{\text{8 ತಾಸು}} = \text{ಘಂಟೆಯ ವೇತನ}$$

10. ಒಂದು ತಿಂಗಳಿನ ನಾಲ್ಕು ರಜಾ ದಿವಸಗಳಲ್ಲಿ ಕಾರ್ಮಿಕನು ಕೆಲಸ ಮಾಡಲು ಇಚ್ಛಿಸಿದಲ್ಲಿ ದ್ವಿಗುಣ ದಿನಭತ್ಯೆ ದರವನ್ನು ಹೆಚ್ಚಿನ ಭತ್ಯೆಯನ್ನಾಗಿ ಪ್ರತಿ ದಿನಕ್ಕೆ ಅವನು/ಅವಳು ಪಡೆಯುತ್ತಾರೆ.

11. ವಾಸ್ತವವಾಗಿ ಕೆಲಸ ನಿರ್ವಹಿಸಲಾದ ದಿವಸಗಳಿಗೆ ದಿನಭತ್ಯೆಯನ್ನು ಲೆಖ್ಖ ಹಾಕಿ ತಿಂಗಳ ಭತ್ಯೆಯನ್ನು ಪಾವತಿಸಬೇಕು.

12. ನೌಕರರ ಭಾಗದ ಇ.ಎಸ್.ಐ./ಪಿ.ಎಫ್. ವಂತಿಗೆ ಹಣವನ್ನು ಖಟಾಯಿಸಿದ ನಂತರ ನೌಕರರಿಗೆ ವೇತನವನ್ನು ಉದ್ಯೋಗದಾತರು ನೇರವಾಗಿ ನೌಕರರ ಬ್ಯಾಂಕ್ ಖಾತೆಗೆ ವರ್ಗಾಯಿಸುವ ಮೂಲಕ ಪಾವತಿಸತಕ್ಕದ್ದು.

13. ಮಾಲೀಕರ ಭಾಗದ ಇ.ಎಸ್.ಐ./ಪಿ.ಎಫ್. ವಂತಿಗೆ ಹಣವನ್ನು ನೌಕರರ ಭಾಗದ ಇ.ಎಸ್.ಐ/ ಪಿ.ಎಫ್ ವಂತಿಗೆಗೆ ಸೇರಿಸಿ, ಮಾಲೀಕರು ನೌಕರರ ಇ.ಎಸ್.ಐ / ಪಿ.ಎಫ್ ಖಾತೆಗೆ ಜಮಾ ಮಾಡತಕ್ಕದ್ದು.

14. ಮಾನವ ಸಂಪನ್ಮೂಲ ಪೂರೈಸುವ ಗುತ್ತಿಗೆದಾರ ಸಂಸ್ಥೆಗಳ ಮೇಲೆ ಮೂಲ ಗುತ್ತಿಗೆದಾರರು ಈ ಕೆಳಕಂಡ ಅಂಶಗಳ ಬಗ್ಗೆ ನಿಗಾ ವಹಿಸತಕ್ಕದ್ದು:-

ಅ) ಮೇಲಿನ ನಿಯಮಗಳಂತೆ, ವೇತನವನ್ನು ಪಾವತಿಸತಕ್ಕದ್ದು.

ಆ) ಪ್ರತಿ ತಿಂಗಳು 5ನೇ ದಿನಾಂಕದೊಳಗೆ ನೌಕರರ ಬ್ಯಾಂಕ್ ಖಾತೆಗೆ ವೇತನದ ಹಣವನ್ನು ಜಮಾ ಮಾಡತಕ್ಕದ್ದು.

ಇ) ಕ್ರಮಬದ್ಧವಲ್ಲದ ಯಾವುದೇ ಕಟಾವಣೆಗಳನ್ನು ಮಾಡಕೂಡದು.

ಈ) ನೌಕರರ ಇ.ಎಸ್.ಐ /ಪಿ.ಎಫ್ ನೊಂದಾಯಿಸಿದ ನೋಂದಾವಣೆ ಸಂಖ್ಯೆಗಳಿಗೆ ಅನುಗುಣವಾಗಿ ಇ.ಎಸ್.ಐ / ಪಿ.ಎಫ್ ವಂತಿಗೆ ಹಣವನ್ನು ಗುತ್ತಿಗೆದಾರ ಕಟಾಯಿಸಿ, ನಿರ್ವಹಿಸಿರುವ ದಾಖಲೆ ಪ್ರಸ್ತುತ ಅವಧಿಗಳಿಗೆ ಸಂಬಂಧಿಸಿರುವುದೆ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು.

15. ನೌಕರರ ಹಾಜರಾತಿಯನ್ನು ಆಧಾರ ಸಂಖ್ಯೆಗೆ ಜೋಡಣೆಯಾಗಿರುವ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆ (AEBAS)ಯ ಮುಖಾಂತರ ನಿರ್ವಹಿಸತಕ್ಕದ್ದು ಹಾಗೂ (AEBAS) ವ್ಯವಸ್ಥೆಯ ಮೂಲಕ ಹಾಜರಾತಿಯನ್ನು ನಿರ್ವಹಿಸಲಾಗದ ಕ್ಷೇತ್ರಗಳಲ್ಲಿ ಕೆಲಸ ನಿರ್ವಹಿಸುವ ನೌಕರರ ಹಾಜರಾತಿಯನ್ನು ಸೂಕ್ತ ವ್ಯವಸ್ಥೆಯ ಮೂಲಕ ನಿರ್ವಹಿಸತಕ್ಕದ್ದು.

16. ಯಾವುದೇ ಪ್ರದೇಶ ಅಥವಾ ಸಂಸ್ಥೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕರು ಕನಿಷ್ಠ ವೇತನ ದರಗಳಿಗಿಂತ ಹೆಚ್ಚಿನ ವೇತನವನ್ನು ಪಡೆಯುತ್ತಿದ್ದಲ್ಲಿ, ಸದರಿ ಹೆಚ್ಚಿನ ವೇತನವನ್ನು ಪಡೆಯಲು ಕಾರ್ಮಿಕರು ಅರ್ಹರಾಗಿದ್ದು, ಅದನ್ನು ಪಾವತಿಸಲು ಉದ್ಯೋಗದಾತರರು ಭಾದ್ಯಸ್ಥರಾಗಿರುತ್ತಾರೆ.

17. ಕನಿಷ್ಠ ವೇತನ ದರಗಳು ಶಾಸನಬದ್ಧ ಪರಿಮಿತಿಯಾಗಿರುವುದರಿಂದ, ಕನಿಷ್ಠ ವೇತನ ದರಗಳನ್ನು ನಮೂದಿಸದೆ ಟೆಂಡರ್ ದಾಖಲೆಯಲ್ಲಿ ಕೇವಲ *"ಸೇವಾ ಶುಲ್ಕವನ್ನು"* ಮಾತ್ರ ನಮೂದಿಸುವ ಅವಕಾಶವನ್ನು ಮಾನವ ಸಂಪನ್ಮೂಲ ಪೂರೈಕೆ ಸಂಸ್ಥೆಗಳಿಗೆ ಕಲ್ಪಿಸುವ ಷರತ್ತಿನೊಂದಿಗೆ ಟೆಂಡರ್‌ನ್ನು ಪ್ರಕಟಿಸತಕ್ಕದ್ದು. ಟೆಂಡರ್‌ನಲ್ಲಿ ಭಾಗವಹಿಸುವ ಎಲ್ಲಾ ಮಾನವ ಸಂಪನ್ಮೂಲ ಪೂರೈಕೆ ಸಂಸ್ಥೆಗಳ ಪೂರ್ವಾಪರಗಳನ್ನು ಪರಿಶೀಲಿಸಿ, (ಅ) ಸದರಿ ಸಂಸ್ಥೆಗಳು ಈ ಹಿಂದೆ ನೌಕರರ ಇ.ಎಸ್.ಐ ಮತ್ತು ಪಿ.ಎಫ್ ವಂತಿಗೆಯನ್ನು ಸರಿಯಾಗಿ ಪಾವತಿಸಿರುವ ಕುರಿತು ಹಿಂದಿನ ಕೆಲವು ವರ್ಷಗಳ ದಾಖಲೆಗಳನ್ನು ಪರಿಶೀಲಿಸಬೇಕು. (ಆ) ಇತರೆ ಅನ್ವಯವಾಗುವ ಕಾರ್ಮಿಕ ಕಾನೂನುಗಳನ್ನು ಪಾಲಿಸಿವೆಯೇ ಎಂಬುದನ್ನು ಪರಿಶೀಲಿಸಿ ಖಚಿತ ಪಡಿಸಿಕೊಳ್ಳಬೇಕು. (ಇ)

ಸದರಿ ಗುತ್ತಿಗೆದಾರರು ಈ ಹಿಂದೆ ಯಾವುದೇ ಸಕ್ಷಮ ನ್ಯಾಯಾಲಯದಿಂದ ಕಾರ್ಮಿಕ ಕಾನೂನಿನ ಉಲ್ಲಂಘನೆಗಾಗಿ ದಂಡನೆಗೊಳಗಾಗಿಲ್ಲದಿರುವ ಬಗ್ಗೆ ಖಚಿತ ಪಡಿಸಿಕೊಳ್ಳಬೇಕು. ಟೆಂಡರ್ ದಾಖಲೆಗಳಲ್ಲಿ ಮೇಲ್ಕಂಡ ಎಲ್ಲಾ ಅಂಶಗಳನ್ನು ಕಡ್ಡಾಯವಾಗಿ ಅಳವಡಿಸಿಕೊಂಡು ಟೆಂಡರ್ ದಾಖಲೆಯನ್ನು ಪ್ರಕಟಿಸತಕ್ಕದ್ದು.

(ಅಮ್ಲನ್ ಆದಿತ್ಯ ಬಿಸ್ವಾಸ್)
ಸರ್ಕಾರದ ಕಾರ್ಯದರ್ಶಿಗಳು,
ಕಾರ್ಮಿಕ ಇಲಾಖೆ.

ಇವರಿಗೆ,

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಈ ಸುತ್ತೋಲೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ, ಸದರಿ ಪ್ರಕಟಣೆಯ 200 ಪ್ರತಿಗಳನ್ನು ಸರ್ಕಾರದ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ, 4ನೇ ಮಹಡಿ, ವಿಕಾಸಸೌಧ, ಬೆಂಗಳೂರು-1 ಇವರಿಗೆ, ಕಳುಹಿಸುವಂತೆ ಕೋರಲಾಗಿದೆ.

ಪ್ರತಿಗಳು:-

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಮಹಾಲೇಖಪಾಲರು, ಲೆಕ್ಕಪತ್ರ/ಲೆಕ್ಕ ಪರಿಶೋಧನೆ, ಕರ್ನಾಟಕ, ಬೆಂಗಳೂರು.
3. ಸರ್ಕಾರದ ಎಲ್ಲಾ ಇಲಾಖೆಗಳ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಅಪರ ಮುಖ್ಯ ಕಾರ್ಯದರ್ಶಿ ರವರಿಗೆ
4. ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
5. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು (ಕಾರ್ಮಿಕ ಆಯುಕ್ತರ ಮೂಲಕ)
6. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, (ಕಾರ್ಮಿಕ ಆಯುಕ್ತರ ಮೂಲಕ)
7. ಎಲ್ಲಾ ಜಿಲ್ಲೆಗಳ ವಿಭಾಗಾಧಿಕಾರಿಗಳು (ಕಾರ್ಮಿಕ ಆಯುಕ್ತರ ಮೂಲಕ)
8. ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
10. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಶಾಖೆ, ವಿಕಾಸ ಸೌಧ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಶಾಖೆ, ವಿಕಾಸ ಸೌಧ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

## 79. Employment in Urban Local Bodies (ULBs), and Panchayath Raj Institutions (PRIs).

**Notification No. KAE 71 LWA 2015, dated 05.08.2016**
Published in Gazette dated 06-08-2016.
Minimum Wages with effect from 05.08.2016
Cost of Living Allowance to be paid over and above 6205 points
Cost of Living Index: 7973 - 6205 = 1768 points
Minimum wages and VDA from 01.04.2021 to 31.03.2022

SCHEDULE

| Sl. No | Class of Employment | Minimum rates of wages payable for different zones | | | | |
|---|---|---|---|---|---|---|
| | | BBMP, All other City Corporations and Zilla Panchayat Institutions of the State | | All Municipalities and Talluk Panchayat Institution of the State (Grade- I) | All Municipalities of the State (Grade-II) | All Town Municipalities Pattana Panchayath and gram panchayats |
| | | Per Month | | | | |
| 1 | Chemist Supervisor (Sanitary) | Basic | 14630.00 | 14190.00 | 13761.00 | 13200.00 |
| | | VDA | 2121.60 | 2121.60 | 2121.60 | 2121.60 |
| | | Total | 16751.60 | 16311.60 | 15882.60 | 15321.60 |
| 2 | Clerk/ Computer Operator/ Data Entry Operator/ Tax Collector/ Electrician/ Lab Technician/ Assistant Librarian | Basic | 13365.00 | 12958.00 | 12606.00 | 12122.00 |
| | | VDA | 2121.60 | 2121.60 | 2121.60 | 2121.60 |
| | | Total | 15486.60 | 15079.60 | 14727.60 | 14243.60 |
| 3 | Driver cum Operators U.G.D/ J.C.B. Compact Machine/ sweeping Machine | Basic | 12650.00 | 12265.00 | 11935.00 | 11440.00 |
| | | VDA | 2121.60 | 2121.60 | 2121.60 | 2121.60 |
| | | Total | 14771.60 | 14386.60 | 14056.60 | 13561.60 |
| 4 | Drivers Lorry/Bus/ Tractor/ Jeep /Car | Basic | 12045.00 | 11715.00 | 11385.00 | 10945.00 |
| | | VDA | 2121.60 | 2121.60 | 2121.60 | 2121.60 |
| | | Total | 14166.60 | 13836.60 | 13506.60 | 13066.60 |
| | Cleaners | Basic | 11011.00 | 10725.00 | 10439.00 | 10010.00 |
| | | VDA | 2121.60 | 2121.60 | 2121.60 | 2121.60 |
| | | Total | 13132.60 | 12846.60 | 12560.60 | 12131.60 |

| | | | | | | |
|---|---|---|---|---|---|---|
| 5 | Pump Operator, Mechanic, **Balawadi** Workers, Plumbers, Horticulture Assistant, Pump Repairer, Water Man, Valveman | Basic<br>VDA<br>**Total** | 11632.00<br>2121.60<br>**13753.60** | 11330.00<br>2121.60<br>**13451.60** | 11028.00<br>2121.60<br>**13149.60** | 10588.00<br>2121.60<br>**12709.60** |
| 6 | Peons/ Attender/ Gardner/ Dafedar/ Cremetorium Watchman/ Watchman/ Office and Premises Cleening other unskilled Category | Basic<br>VDA<br>Total | 11011.00<br>2121.60<br>**13132.60** | 10725.00<br>2121.60<br>**12846.60** | 10439.00<br>2121.60<br>**12560.60** | 10010.00<br>2121.60<br>**12131.60** |
| 7 | Sweeping the roads, Sewerage, Bathroom and latrines Cleaning with the help of Machnicines Segregating Loading and Unloading of wastes | Basic<br>VDA<br>Total | 14040.00<br>2121.60<br>**16161.60** | 13650.00<br>2121.60<br>**15771.60** | 13260.00<br>2121.60<br>15381.60 | 12870.00<br>2121.60<br>**14991.60** |

V. D.A. : In addition to the basic wages, all Category of Employees in the state shall be paid V. D.A. at the rate of 4 Paise per point over and above 6205 points.

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಡಾ: ತೇಜಸ್ವಿನಿ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1167 ಕ್ಕೆ **ಅನುಬಂಧ–2**

**2021–22ನೇ ಸಾಲಿನ ಅನುಸೂಚಿತ ಉದ್ದಿಮೆಗಳಿಗೆ ಕನಿಷ್ಠ ವೇತನ ನಿಗದಿ ಮತ್ತು ಪರಿಷ್ಕರಣೆ ಕುರಿತ ಕನಿಷ್ಠ ಮತ್ತು ಗರಿಷ್ಠ ವೇತನ ದರಗಳ ವಿವರಣೆ**

| ಕ್ರಮ ಸಂಖ್ಯೆ | ಅನುಸೂಚಿತ ಉದ್ದಿಮೆಯ ಹೆಸರು | ಕನಿಷ್ಠ ವೇತನ ದರಗಳು (2021–22) | | | |
|---|---|---|---|---|---|
| | | ದೈನಿಕ | | ಮಾಸಿಕ | |
| | | ಕನಿಷ್ಠ | ಗರಿಷ್ಠ | ಕನಿಷ್ಠ | ಗರಿಷ್ಠ |
| 1 | ಬೇಸಾಯ ಮತ್ತು ಸಂಬಂಧಿತ ಕೆಲಸಗಳಲ್ಲಿ ಉದ್ಯೋಗ | 441.28 | 448.28 | 11473.16 | 11473.16 |
| 2 | ಲಘು ಪಾನೀಯ ಸೋಡಾ ಸಹಿತ ಎಲ್ಲಾ ಇಂಗಾಲಾಮ್ಲಿತ ಪಾನೀಯ, ಮಿನರಲ್ (ಖನಿಜ) ನೀರು ಮತ್ತು ಜ್ಯೂಸ್ (ಹಣ್ಣಿನ ರಸ) ಉತ್ಪಾದನೆ ಹಾಗೂ ಸಂಬಂಧಪಟ್ಟ ಪ್ರಕ್ರಿಯೆಗಳಲ್ಲಿ ಉದ್ಯೋಗ. | 431.60 | 506.60 | 11221.60 | 13171.60 |
| 3 | ಅಗರಬತ್ತಿ ತಯಾರಿಕೆ ಮತ್ತು ಸಾಂಬ್ರಾಣಿ (ಇನ್‌ಸೆನ್ಸ್) ಉತ್ಪನ್ನಗಳ ತಯಾರಿಕೆಯಲ್ಲಿ ಉದ್ಯೋಗ | 383.90 | 443.52 | 9981.60 | 11531.60 |
| 4 | ಅಡಿಕೆ (ಸುಪಾರಿ)ಉದ್ದಿಮೆಗಳಲ್ಲಿ ಉದ್ಯೋಗ | 451.27 | 511.97 | 11733.20 | 13311.03 |
| 5 | ಸ್ವಯಂಯಾನ ಯಂತ್ರ ಶಾಸ್ತ್ರ (ಆಟೋಮೊಬೈಲ್ ಇಂಜಿನಿಯರಿಂಗ್) (ಉತ್ಪಾದನೆ, ಅಸೆಂಬ್ಲಿಂಗ್, ಬಾಡಿ ಬಿಲ್ಡಿಂಗ್, ಸರ್ವೀಸಿಂಗ್ ಮತ್ತು ರಿಪೇರಿ ಕೆಲಸಗಳ ಸಹಿತ) | 431.60 | 557.60 | 11221.60 | 14497.60 |
| 6 | ಬೇಕರಿ ಉದ್ದಿಮೆ ಮತ್ತು ಬೇಕಿಂಗ್ ಪ್ರಕ್ರಿಯೆಗಳಲ್ಲಿ ಉದ್ಯೋಗ. | 451.28 | 659.49 | 11733.20 | 17146.60 |
| 7 | ಬೀಡಿ ತಯಾರಿಕೆ ಪ್ರಕ್ರಿಯೆಯಲ್ಲಿ ಉದ್ಯೋಗ | 240.61 | 294.45 | 11756.60 | 16356.00 |
| 8 | ತಂಬಾಕು ಸಂಸ್ಕರಣಾ ಉದ್ದಿಮೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 9 | ಬಿಸ್ಕತ್ ತಯಾರಿಕಾ ಸಂಸ್ಥೆಗಳಲ್ಲಿ ಉದ್ಯೋಗ | 451.28 | 605.56 | 11733.20 | 15744.47 |
| 10 | ಹಿತ್ತಾಳೆ, ತಾಮ್ರ, ಅಲ್ಯೂಮಿನಿಯಂ, ಉಕ್ಕು (ಸ್ಟೀಲ್), ಹಿಂಡಾಲಿಯಮ್ ಪಾತ್ರೆಗಳು ಮತ್ತು ಇತರೆ ಉತ್ಪನ್ನಗಳ ತಯಾರಿಕೆಯಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 11 | ಇಟ್ಟಿಗೆ ತಯಾರಿಕೆ ಹಾಗೂ ಪೂರ್ವ ಒತ್ತಡ (ಪ್ರೀ–ಸ್ಟ್ರೆಸ್ಡ್) ದೊಂದಿಗೆ ತಯಾರಿಸಿದ ಉತ್ಪನ್ನಗಳ ತಯಾರಿಕೆಯ ಉದ್ದಿಮೆಗಳಲ್ಲಿ ಉದ್ಯೋಗ | 451.28 | 617.16 | 11733.20 | 16046.20 |
| 12 | ಮರದ ಕೆಲಸ [ಕಾರ್ಪೆಂಟರಿ] ಹಾಗೂ ಮರ ಕೊಯ್ಯುವ [ಸಾಮಿಲ್] ಸಂಸ್ಥೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 13 | ಬೆಂಕಿ ಪೊಟ್ಟಣ ತಯಾರಿಕೆ ಉದ್ದಿಮೆಗಳಲ್ಲಿ ಉದ್ಯೋಗ | 341.00 | 366.03 | 8866.00 | 9517.00 |
| 14 | ಪ್ಲೈವುಡ್ ತಯಾರಿಕಾ ಸಂಸ್ಥೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 15 | ಮರದ ದಿಮ್ಮಿಗಳ ಘಟಕಗಳಲ್ಲಿ ಉದ್ಯೋಗ. | 431.60 | 501.60 | 11221.60 | 13041.60 |
| 16 | ವಿನೀರ್ ಉದ್ದಿಮೆಗಳಲ್ಲಿ ಉದ್ಯೋಗ | 431.60 | 495.60 | 11221.60 | 12885.60 |
| 17 | ಏಲಕ್ಕಿ ಮಲೈಗಳು ಮತ್ತು ಏಲಕ್ಕಿ ತೋಟಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 18 | ಗೋಡಂಬಿ ಸಂಸ್ಕರಣಾ ಉದ್ದಿಮೆಗಳಲ್ಲಿ ಉದ್ಯೋಗ. | 422.15 | 477.05 | 10976.00 | 12406.00 |
| 19 | ಜೇಡಿ ಮಣ್ಣಿನ ಮಡಿಕೆಗಳು, ಸಿರಾಮಿಕ್ಸ್ ಸ್ಟೋನ್ ವೇರ್ ಮತ್ತು ಇತರೆ ಉತ್ಪನ್ನಗಳ ತಯಾರಿಕಾ ಸಂಸ್ಥೆಗಳಲ್ಲಿ ಉದ್ಯೋಗ | 431.60 | 503.60 | 11221.60 | 13093.60 |

| | | | | | |
|---|---|---|---|---|---|
| 20 | ಸಿಂಕೋನಾ, ರಬ್ಬರ್, ಟೀ & ಕಾಫೀ ತೋಟಗಳಲ್ಲಿ ಉದ್ಯೋಗ (ಕಛೇರಿ ಸಿಬ್ಬಂದಿಗಳನ್ನು ಹೊರತುಪಡಿಸಿ) | 357.15 | 363.15 | 9286.00 | 9416.00 |
| 21 | ಸಿಂಕೋನಾ, ರಬ್ಬರ್, ಟೀ & ಕಾಫೀ ತೋಟಗಳಲ್ಲಿ ಉದ್ಯೋಗ (ಕಛೇರಿ ಸಿಬ್ಬಂದಿಗಳು) | 366.15 | 400.15 | 9500.00 | 10398.00 |
| 22 | ರಾಸಾಯನಿಕ ರಸಗೊಬ್ಬರ, ಕೀಟ ನಾಶಕ, ಕ್ರಿಮಿನಾಶಕ ಉತ್ಪಾದನಾ ಉದ್ದಿಮೆಯ ಕೆಲಸಗಳಲ್ಲಿ ಯೋಜನೆ | 451.28 | 659.49 | 11733.20 | 17146.60 |
| 23 | ಕ್ಲಬ್‌ಗಳಲ್ಲಿ ಉದ್ಯೋಗ | 431.60 | 496.60 | 11221.60 | 12911.60 |
| 24 | ಕಾಫಿ ಕ್ಯೂರಿಂಗ್ ಸಂಸ್ಥೆಗಳಲ್ಲಿ ಉದ್ಯೋಗ. | 451.15 | 555.42 | 11730.00 | 14441.00 |
| 25 | ಮಿಠಾಯಿ ತಯಾರಿಸುವ (ಕನ್‌ಫೆಕ್ಷನರಿ) ಉದ್ದಿಮೆಗಳಲ್ಲಿ ಉದ್ಯೋಗ. | 451.28 | 605.56 | 11733.20 | 15744.47 |
| 26 | ಹತ್ತಿ ಹೆಕ್ಕುವ, ಅಮುಕುವ ಮತ್ತು ಸಂಬಂಧಪಟ್ಟ ಪ್ರಕ್ರಿಯೆಗಳ ಕೆಲಸಗಳಲ್ಲಿ ಉದ್ಯೋಗ. | 434.16 | 491.73 | 11288.28 | 12784.80 |
| 27 | ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಉದ್ಯೋಗ | 451.22 | 526.22 | 11731.60 | 13681.60 |
| 28 | ಗೃಹಕೃತ್ಯ ಸಹಾಯಕರು, ಮಕ್ಕಳ ಪೋಷಣಾ ಸಹಾಯಕರು, ಹೋಮ್ ನರ್ಸ್‌ಗಳ ಸಹಿತ ವಾಸದ ಮನೆಗಳಲ್ಲಿ ಗೃಹ ಕೆಲಸಗಳ ಉದ್ಯೋಗ | 451.22 | 536.22 | 11731.60 | 14461.60 |
| 29 | ಎಲೆಕ್ಟ್ರಾನಿಕ್ಸ್ ಉದ್ದಿಮೆಗಳಲ್ಲಿ ಉದ್ಯೋಗ | 431.60 | 526.60 | 11221.60 | 13691.60 |
| 30 | ಎಲೆಕ್ಟ್ರಾನಿಕ್ಸ್ ಮತ್ತು ಎಲೆಕ್ಟ್ರೋಪ್ಲೇಟಿಂಗ್ ಉದ್ದಿಮೆಗಳಲ್ಲಿ ಉದ್ಯೋಗ. | 431.60 | 506.60 | 11221.60 | 13171.60 |
| 31 | ಅನುಸೂಚಿತ ಪಟ್ಟಿಗೆ ಸೇರದ ಉದ್ದಿಮೆಯ ಕೆಲಸದಲ್ಲಿ ಉದ್ಯೋಗ. ಕರ್ನಾಟಕ ರಾಜ್ಯ ತಳ ಹಂತದ ಕನಿಷ್ಠ ವೇತನ. | 451.28 | 659.49 | 11733.60 | 17146.60 |
| 32 | ಇಂಜಿನಿಯರಿಂಗ್, ಪ್ಯಾಬ್ರಿಕೇಷನ್ ಹಾಗೂ ಸಂಬಂಧಪಟ್ಟ ಉದ್ದಿಮೆಯ ಕೆಲಸಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 33 | ಚಲನಚಿತ್ರ (ಸಿನಿಮಾ / ಕಿರು ಚಿತ್ರ) ಉದ್ದಿಮೆಗಳ ನಿರ್ಮಾಣ, ವಿತರಣೆ, ಜಾಹಿರಾತು ಹಾಗೂ ಸಂಬಂಧಪಟ್ಟ ಕೆಲಸಗಳಲ್ಲಿ ಉದ್ಯೋಗ | 431.60 | 521.60 | 11221.60 | 13561.60 |
| 34 | ಮೀನು ಹಿಡಿಯುವುದು, ಮೀನು ಸಂಸ್ಕರಣೆ, ಮೀನು ಪೀಲಿಂಗ್, ಸೀಗಡಿ / ಏಡಿ ಸಂಸ್ಕರಣೆ ಹಾಗೂ ಕಪ್ಪೆ ಕಾಲು ರಫ್ತು ಮಾಡುವ ಉದ್ದಿಮೆಗಳಲ್ಲಿ ಉದ್ಯೋಗ | 404.45 | 606.60 | 11871.60 | 15771.60 |
| 35 | ಆಹಾರ ಸಂಸ್ಕರಣೆ ಮತ್ತು ಆಹಾರ ಪದಾರ್ಥಗಳ ಪ್ಯಾಕಿಂಗ್ (ಸಿದ್ಧ ತಿನಿಸುಗಳು, ಸಿದ್ಧ ಪಾನೀಯ ಹಾಗೂ ಮಸಾಲೆ ಸಹಿತ) ಪ್ರಕ್ರಿಯೆಗಳಲ್ಲಿ ಉದ್ಯೋಗ | 431.60 | 506.60 | 11221.60 | 13171.60 |
| 36 | ಅರಣ್ಯ ಮತ್ತು ಕಟ್ಟಿಗೆ ಡಿಪೋ (ಫಾರೆಸ್ಟ್ರಿ ಮತ್ತು ಟಿಂಬರಿಂಗ್) ಉದ್ದಿಮೆಗಳಲ್ಲಿ ಉದ್ಯೋಗ | 511.91 | 605.56 | 13311.03 | 15744.47 |
| 37 | ಫೌಂಡ್ರಿ (ಯಂತ್ರಗಳ ಸಹಿತ ಅಥವಾ ರಹಿತ ಮೆಷಿನ್ ಶಾಪ್) ಗಳಲ್ಲಿ ಉದ್ಯೋಗ | 431.60 | 557.60 | 11221.60 | 14497.60 |
| 38 | ಗಾಜು ಮತ್ತು ಗಾಜಿನ ಉತ್ಪನ್ನಗಳ ಸಂಸ್ಥೆಗಳಲ್ಲಿ ಉದ್ಯೋಗ | 431.60 | 511.60 | 11221.60 | 13301.60 |
| 39 | ಗ್ರಾನೈಟ್ ಕಲ್ಲುಗಳು ಹಾಗೂ ಮಾರ್ಬಲ್ ಉದ್ದಿಮೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 40 | ಕೈಮಗ್ಗ ಮತ್ತು ವಿದ್ಯುತ್‌ಚಾಲಿತ ಮಗ್ಗ [ಹತ್ತಿ] ಉದ್ದಿಮೆಗಳಲ್ಲಿ ಉದ್ಯೋಗ. | 409.84 | 473.30 | 10656.00 | 12306.00 |

| | | | | | |
|---|---|---|---|---|---|
| 41 | **ಆಸ್ಪತ್ರೆಗಳು, ಪ್ರಸವಾಲಯಗಳು (ಮೆಟರ್ನಿಟಿ ಹೋಂಗಳು), ಶುಶ್ರೂಷಾಲಯ (ನರ್ಸಿಂಗ್** ಹೋಂಗಳು) ಕ್ಲಿನಿಕ್, ಹಾಗೂ ವ್ಯಸನ ಮುಕ್ತ ಕೇಂದ್ರಗಳಲ್ಲಿ ಉದ್ಯೋಗ | 451.22 | 641.19 | 11731.60 | 16671.60 |
| 42 | ವಸತಿ ನಿಲಯಗಳು (ಹಾಸ್ಟೆಲ್‌ಗಳು), ಅತಿಥಿ ಗೃಹಗಳು, ಹೋಮ್ ಸ್ಟೇಗಳು, ಪೇಯಿಂಗ್ ಗೆಸ್ಟ್ ಸಂಸ್ಥೆಗಳು, ಸರ್ವೀಸ್ಡ್ ಅಪಾರ್ಟ್‌ಮೆಂಟ್‌ಗಳು, ರೆಸಿಡೆಂಟ್ಸ್ ಅಸೋಸಿಯೇಷನ್, ಮದುವೆ ಹಾಗೂ ಸಮುದಾಯ ಭವನಗಳಲ್ಲಿ ಉದ್ಯೋಗ | 431.60 | 518.60 | 11221.60 | 13483.60 |
| 43 | ಹೋಟೆಲ್ / ವಸತಿ ಸಹಿತ ಹೋಟೆಲ್‌ಗಳು, ರೆಸ್ಟೋರೆಂಟ್ ಮೋಟೆಲ್‌ಗಳು, ಲಾಡ್ಜ್‌ಗಳು, ಡಾಬಾಗಳು, ಕ್ಯಾಂಟೀನ್, ಹೊರಾಂಗಣ ಆಹಾರ ತಯಾರಿಕೆ ಹಾಗೂ ಸರಬರಾಜು (ಕೇಟರಿಂಗ್) ಮತ್ತು ಸಂಬಂಧಪಟ್ಟ ಸಂಸ್ಥೆಗಳಲ್ಲಿ ಉದ್ಯೋಗ | 431.60 | 536.68 | 11221.60 | 13951.60 |
| 44 | ಮಂಜುಗಡ್ಡೆ ಕಾರ್ಖಾನೆ (ಐಸ್ ಫ್ಯಾಕ್ಟರಿ) ಐಸ್ ಕ್ರೀಮ್ ಹಾಗೂ ಶೀತಲ ಸಂರಕ್ಷಣಾ ಸಂಸ್ಥೆಗಳಲ್ಲಿ ಉದ್ಯೋಗ. | 456.60 | 518.60 | 11871.60 | 13483.60 |
| 45 | ಖಂಡಸಾರಿ ಸಕ್ಕರೆ ಕಾರ್ಖಾನೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 46 | ಬಟ್ಟೆ ಒಗೆಯುವ, ಡ್ರೈಕ್ಲೀನ್ ಮತ್ತು ಲಾಂಡ್ರಿ ಉದ್ದಿಮೆಗಳ ಕೆಲಸಗಳಲ್ಲಿ ಉದ್ಯೋಗ | 431.60 | 521.60 | 11221.60 | 13561.60 |
| 47 | ಮದ್ಯ ತಯಾರಿಕಾ (ಡಿಸ್ಟಿಲರೀಸ್ ಹಾಗೂ ಬ್ರಿವರೀಸ್), ಬಾಟಲಿಂಗ್ ಹಾಗೂ ಪ್ಯಾಕಿಂಗ್ ಸಹಿತ ಉದ್ದಿಮೆಗಳ ಕೆಲಸಗಳಲ್ಲಿ ಉದ್ಯೋಗ | 431.60 | 506.60 | 11221.60 | 13171.60 |
| 48 | ಆಯುರ್ವೇದ, ಯೋಗ, ಯುನಾನಿ, ಸಿದ್ಧ ಹೋಮಿಯೋಪತಿ (ಆಯುಷ್) ಹಾಗೂ ಅಲೋಪತಿಕ್ ಔಷಧಿಗಳ ತಯಾರಿಕೆಯಲ್ಲಿ ಉದ್ಯೋಗ. (ಉತ್ಪಾದನೆ, ವಿತರಣೆ ಜಾಹಿರಾತು ವಿಭಾಗಗಳ ಸಹಿತ) | 431.60 | 531.60 | 11221.60 | 13821.60 |
| 49 | ಅಕ್ಕಿ, ಭತ್ತ, ಜೋಳ ಅಥವಾ ಇನ್ನಿತರ ಧಾನ್ಯಗಳಿಂದ ಮಂಡಕ್ಕಿ, ಅವಲಕ್ಕಿ, ಚುರುಮುರಾ, ಮುರುಮುರಾ ಹಾಗೂ ಇತರೆ ಉತ್ಪನ್ನಗಳನ್ನು ತಯಾರಿಸುವ ಉದ್ದಿಮಗಳ ಕೆಲಸದಲ್ಲಿ ಉದ್ಯೋಗ | 451.28 | 605.56 | 11733.20 | 15744.47 |
| 50 | ಮೆಟಲ್ ರೋಲಿಂಗ್ ಅಂಡ್ ರೀರೋಲಿಂಗ್– [ಫೆರಸ್] ಉದ್ದಿಮೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 51 | ಮೆಟಲ್ ರೋಲಿಂಗ್ ಅಂಡ್ ರೀರೋಲಿಂಗ್ ಉದ್ದಿಮೆಗಳಲ್ಲಿ ಉದ್ಯೋಗ. [ನಾನ್–ಫೆರಸ್] | 451.28 | 659.49 | 11733.20 | 17146.60 |
| 52 | ಲಘು ಸಿಮೆಂಟ್ ಸ್ಥಾವರಗಳಲ್ಲಿ ಉದ್ಯೋಗ. | 431.60 | 496.60 | 11221.60 | 12911.60 |
| 53 | ಮೊಸಾಯಿಕ್ ಹಂಚುಗಳು, ಎಲ್ಲಾ ರೀತಿಯ ನೆಲ ಹಾಸು ಹಂಚುಗಳು, ಹೊಳಪಿನ ಹಂಚುಗಳ ಉತ್ಪಾದನಾ ಉದ್ದಿಮೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 54 | ಎಣ್ಣೆ ಮಿಲ್‌ಗಳಲ್ಲಿ ಉದ್ಯೋಗ. | 431.60 | 501.60 | 11211.60 | 13041.60 |

| | | | | | |
|---|---|---|---|---|---|
| **55** | **ಪೆಟ್ರೋಲ್, ಡೀಸೆಲ್ ಆಯಿಲ್ ಮತ್ತು ಎಲ್.ಪಿ.ಜಿ. ಪಂಪ್‌ಗಳಲ್ಲಿ ಉದ್ಯೋಗ** | **451.28** | **659.49** | **11733.20** | **17146.60** |
| 56 | ಪ್ಲಾಸ್ಟಿಕ್, ಪಾಲಿ ಪ್ಲಾಸ್ಟಿಕ್, ರಬ್ಬರ್, ಪಿವಿಸಿ ಪೈಪ್ಸ್ ಉತ್ಪಾದನಾ ಉದ್ದಿಮೆಗಳಲ್ಲಿ ಉದ್ಯೋಗ | 431.60 | 496.60 | 11221.60 | 12911.60 |
| 57 | ಮುದ್ರಣ ಹಾಗೂ ಪ್ರಸರಣಾ ಉದ್ದಿಮೆಗಳಲ್ಲಿ ಉದ್ಯೋಗ | 431.60 | 503.60 | 11221.60 | 13093.60 |
| 58 | ಖಾಸಗಿ ವಿತ್ತ ನಿಗಮಗಳು, (ಫೈನಾನ್ಸ್ ಕಾರ್ಪೋರೇಷನ್) ಚಿಟ್ ಫಂಡ್‌ಗಳು ಹಾಗೂ ಕಾನೂನು ಬದ್ಧ ಬ್ಯಾಂಕಿಂಗ್ ರಹಿತ ನಗದು ವಹಿವಾಟು ಸಂಸ್ಥೆಗಳಲ್ಲಿ ಉದ್ಯೋಗ | 431.60 | 506.60 | 11221.60 | 13171.60 |
| 59 | ಶೌಚಾಲಯಗಳು, ಸ್ನಾನಗೃಹಗಳು, ಒಳಚರಂಡಿಗಳನ್ನು ಶುಚಿ ಮಾಡುವ (ಖಿಭಿಚಿತಜಟಿರುಟಿಂ) ಕೆಲಸಗಳಲ್ಲಿ ಉದ್ಯೋಗ. (ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳನ್ನು ಹೊರತುಪಡಿಸಿ). | 591.22 | 641.22 | 15371.00 | 16671.60 |
| 60 | ಹಾಲು ಶೇಖರಣೆ, ಸಂಸ್ಕರಣೆ ಹಾಗೂ ವಿತರಣಾ ಪ್ರಕ್ರಿಯೆಯ ಉದ್ದಿಮೆಗಳಲ್ಲಿ ಉದ್ಯೋಗ | 431.60 | 506.60 | 11221.60 | 13171.60 |
| 61 | ಸಾರ್ವಜನಿಕ ಸಾರಿಗೆ ಸಂಸ್ಥೆಗಳ ಉದ್ದಿಮೆಗಳಲ್ಲಿ ಉದ್ಯೋಗ | 431.60 | 531.60 | 11221.60 | 13821.60 |
| 62 | ಕಾಗದ, ಪಲ್ಪ್ ಕಾಗದ, ರಟ್ಟಿನ ಹಲಗೆ (ಕಾರ್ಡ್‌ಬೋರ್ಡ್), ಹುಲ್ಲಿನ ಹಲಗೆ (ಸ್ಟ್ರಾ ಬೋರ್ಡ್) ಮತ್ತು ನ್ಯೂಸ್ ಪ್ರಿಂಟ್ ಉದ್ದಿಮೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 63 | ಅಕ್ಕಿ, ಧಾನ್ಯಗಳು ಮತ್ತು ಬೇಳೆ ಗಿರಣಿ ಉದ್ದಿಮೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 64 | ರಬ್ಬರ್ ಉತ್ಪನ್ನಗಳು (ಫೋಮ್ ಮತ್ತು ಕಾಯರ್ ರಬ್ಬರ್ ಸಹಿತ) ಉದ್ದಿಮೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 65 | ಔಷಧಿಗಳು, ಗೃಹಪಯೋಗಿ ವಸ್ತುಗಳ ವೃತ್ತಿಪರ ಪ್ರವರ್ತಕ ಮತ್ತು ಮಾರಾಟದಲ್ಲಿ ಉದ್ಯೋಗ | 431.60 | 526.60 | 11221.60 | 13961.60 |
| 66 | ಭದ್ರತಾ ಏಜೆನ್ಸಿಗಳಲ್ಲಿ ಉದ್ಯೋಗ. (ಕಛೇರಿ ಸಿಬ್ಬಂದಿ ಹಾಗೂ ಭದ್ರತಾ ಸಿಬ್ಬಂದಿಗಳನ್ನು ಏಜೆನ್ಸಿಯ ಮೂಲಕ ನಿಯೋಜಿಸಿಕೊಳ್ಳುವ ಎಲ್ಲಾ ಸಂಸ್ಥೆಗಳು ಹಾಗೂ ಉದ್ದಿಮೆಗಳ ಸಹಿತ). | 451.22 | 576.60 | 11731.60 | 14991.60 |
| 67 | ರೇಷ್ಮೆ ಘಟಕಗಳಲ್ಲಿ ಮತ್ತು ಪ್ರಕ್ರಿಯೆಗಳಲ್ಲಿ ಉದ್ಯೋಗ ಭಾಗ–1 | 418.74 | 605.50 | 10887.20 | 15744.47 |
| 68 | ರೇಷ್ಮೆ ಘಟಕಗಳಲ್ಲಿ ಮತ್ತು ಪ್ರಕ್ರಿಯೆಗಳಲ್ಲಿ ಉದ್ಯೋಗ ಭಾಗ–2 | 451.28 | 659.49 | 11733.20 | 17146.60 |
| 69 | ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 70 | ಸ್ಪಿನ್ನಿಂಗ್ ಮಿಲ್ ಉದ್ದಿಮೆಗಳಲ್ಲಿ ಉದ್ಯೋಗ | 351.88 | 378.73 | 9148.87 | 9847.08 |
| 71 | ಸ್ಪನ್ ಪೈಪುಗಳು, ಕಾಂಕ್ರೀಟ್ ಪೈಪುಗಳು, ಸಾನಿಟರಿ ಫಿಟ್ಟಿಂಗ್‌ಗಳು, ಪ್ಲೈನ್ ಸಿಮೆಂಟ್ ಕಾಂಕ್ರೀಟ್ (ಪಿ.ಸಿ.ಸಿ.) ಹಾಗೂ ರೀ–ಇನ್‌ಪೋರ್ಸ್‌ಡ್ ಸಿಮೆಂಟ್ ಕಾಂಕ್ರೀಟ್ (ಆರ್.ಸಿ.ಸಿ). ಪೈಪುಗಳು ಮತ್ತು ಕಂಬಗಳ ಉತ್ಪಾದನಾ ಉದ್ದಿಮೆಗಳಲ್ಲಿ ಉದ್ಯೋಗ | 431.60 | 531.60 | 11221.60 | 13821.60 |
| 72 | ಲೋಹದ ಅಲ್ಮೇರಾಗಳು, ಕುರ್ಚಿಗಳು, ಮೇಜುಗಳು | 431.60 | 531.60 | 11221.60 | 13821.60 |

| | | | | | |
|---|---|---|---|---|---|
| | ಹಾಗೂ ಇತರೆ ಪೀಠೋಪಕರಣಗಳನ್ನು ಉತ್ಪಾದಿಸುವ ಉದ್ದಿಮೆಗಳಲ್ಲಿ ಉದ್ಯೋಗ | | | | |
| 73 | ಕಲ್ಲು ಒಡೆಯುವುದು ಮತ್ತು ಕಲ್ಲು ಪುಡಿ ಮಾಡುವ ಉದ್ದಿಮೆಗಳಲ್ಲಿ ಉದ್ಯೋಗ | 451.28 | 605.56 | 11733.20 | 15744.47 |
| 74 | ಚರ್ಮ ಹದ ಮಾಡುವ ಉದ್ದಿಮೆಗಳಲ್ಲಿ ಉದ್ಯೋಗ | 345.26 | 384.26 | 8976.80 | 10000.80 |
| 75 | ಬಟ್ಟೆಗಳ ತಯಾರಿಕೆ (ಗಾರ್ಮೆಂಟ್ಸ್), ವಸ್ತ್ರ ವಿನ್ಯಾಸ (ಕಾಸ್ಟ್ಯೂಮ್ಸ್) ಮತ್ತು ಟೈಲರಿಂಗ್ ಉದ್ದಿಮೆಗಳಲ್ಲಿ ಉದ್ಯೋಗ | 354.21 | 413.41 | 9204.30 | 10758.86 |
| 76 | ರೇಷ್ಮೆ ಬಟ್ಟೆಗಳ (ಸಿಲ್ಕ್) ಉದ್ದಿಮೆಗಳಲ್ಲಿ ಉದ್ಯೋಗ | 419.36 | 512.95 | 10903.39 | 13336.70 |
| 77 | ಹೆಂಚು ತಯಾರಿಕೆ ಉದ್ದಿಮೆಗಳಲ್ಲಿ ಉದ್ಯೋಗ | 451.28 | 605.56 | 11733.20 | 15744.47 |
| 78 | ಶೇಂದಿ ಇಳಿಸುವ ಉದ್ದಿಮೆಗಳಲ್ಲಿ ಉದ್ಯೋಗ | 451.28 | 605.56 | 11733.20 | 15744.47 |
| 79 | ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಉದ್ಯೋಗ | 466.60 | 14991.60 | 12131.60 | 16751.60 |
| 80 | ಸಹಕಾರ ಸೊಸೈಟಿಗಳಲ್ಲಿ ಉದ್ಯೋಗ | 451.28 | 659.99 | 11733.20 | 17146.60 |
| 81 | ಚಿನ್ನ ಮತ್ತು ಬೆಳ್ಳಿ ಆಭರಣಗಳ ತಯಾರಿಕೆ ಮತ್ತು ಹರಳುಗಳು, ವಜ್ರಗಳನ್ನು ಕತ್ತರಿಸುವುದು, ಹೊಳಪು ಗೊಳಿಸುವ ಉದ್ದಿಮೆಗಳಲ್ಲಿ ಉದ್ಯೋಗ | 451.28 | 659.49 | 11733.20 | 17146.60 |
| 82 | ಬಟ್ಟೆಗಳಿಗೆ ಬಣ್ಣ ಹಾಕುವ (ಡೈ) ಮತ್ತು ಅಚ್ಚು ಹಾಕುವ (ಪ್ರಿಂಟ್) ಹಾಕುವ ಉದ್ದಿಮೆಗಳಲ್ಲಿ ಉದ್ಯೋಗ | 356.57 | 423.19 | 9270.95 | 11003.07 |
| 83 | ಸರಕು ಸಾಮಗ್ರಿಗಳ ಹೇರುವ ಮತ್ತು ಇಳಿಸುವ (ಲೋಡಿಂಗ್ ಮತ್ತು ಅನ್‌ಲೋಡಿಂಗ್) ಕೆಲಸಗಳಲ್ಲಿ ಉದ್ಯೋಗ | ತುಂಡು ಆಧಾರ | | | |

ಆಯುಕ್ತರು
ಕಾರ್ಮಿಕ ಇಲಾಖೆ